ಓ.ಎಸ್.ನಂ.66/2020
ಪಿ ಡಬ್ಲ್ಯು-1

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು, ದಿನಾಂಕಃ12.07.2022.**

**ಮುಖ್ಯ ವಿಚಾರಣೆಃ- ವಾದಿ ಪರ ವಕೀಲರಿಂದಃ-**

ನಾನು ನನ್ನ ಮೌಖಿಕ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ. ದಾವೆಗೆ ಸಂಬಂಧಪಟ್ಟ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

ಈಗ ನೋಡುತ್ತಿರುವ ಪಾಲು ವಿಭಾಗ ಪತ್ರ ದಿಃ05.11.2016 ನೇದ್ದನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.1 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ದಾವಾ ಆಸ್ತಿಗೆ ಸಂಬಂದಪಟ್ಟ ಪಂಚಾಯಿತಿ ಉತಾರ್ ನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.2 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ದಾವಾ ಆಸ್ತಿಗೆ ಸಂಬಂದಪಟ್ಟ ನಮೂನೆ-11ಎ ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.3 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ದಾವಾ ಆಸ್ತಿಗೆ ಸಂಬಂದಪಟ್ಟ ತೆರಿಗೆಯ ವಸೂಲಿ ಪಸ್ತುಕ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.4 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ದಾವಾ ಆಸ್ತಿಗೆ ಸಂಬಂದಪಟ್ಟ ಸನ್ 2008-09, 2011-12, 2014-15 ಸಾಲಿನ ಕರ ಆಕರಣೆ ರಿಜಿಸ್ಟರ್ ಪ್ರತಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.5 ರಿಂದ 7 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ದಾವಾ ಆಸ್ತಿಗೆ ಸಂಬಂದಪಟ್ಟ 2 ಕರ ಪಾವತಿಸಿದ ರಶೀದಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.8 ಮತ್ತು 9 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಮನೆ ಮಂಜೂರಾತಿ ಆದೇಶ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.10 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಮನೆ ಕಟ್ಟಡ ಪರವಾನಗಿ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.11

ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಪಿ.ಡಿ.ಓ. ಗ್ರಾಮ ಪಂಚಾಯಿತಿ ಅಸಗೋಡು ಇವರು ನೀಡಿದ ಎರಡು ದೃಡೀಕರಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.12 ಮತ್ತು 13 ಎಂದು ಗುರುತಿಸಲಾಯಿತು.

ದಾವೆಯಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ಪ್ರತಿವಾದಿ ಪರ ವಕೀಲರಿಂದಃ-

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದರಿಂದ, ಪಾಟೀ ಸವಾಲು ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

ಸಿವಿಲ್ ನ್ಯಾಯಾಧೀಶರು, ಜಗಳೂರು